ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ ಮೈಸೂರು

ವಿಷಯ: 2018–19ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ:1. ಈ ಕಛೇರಿ ಪತ್ರ ಸಂಖ್ಯೆ : ಇಟ11/152/2012–13 ದಿನಾಂಕ:27–07–2018.

2. ನಿರ್ದೇಶಕರು, ಮಹಿಳಾ ಅಧ್ಯಯನ ಕೇಂದ್ರ, ಮಾನಸಗಂಗೋತ್ರಿ, ಮೈಸೂರು ಅವರ ಪತ್ರಸಂಖ್ಯೆ:CWS/1542018-19, ದಿನಾಂಕ:03–10–2018.

3. ಮಾನ್ಯಕುಲಪತಿಯವರ ಆದೇಶ ದಿನಾಂಕ:11–10–2018.

**ಪ್ರಸ್ತಾವನೆ:**

ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರುಗಳು ಕರ್ನಾಟಕ ರಾಜ್ಯ ಉಚ್ಚನ್ಯಾಯಾಲಯದಲ್ಲಿ ಹೂಡಿರುವ ದಾವೆಯ ಸಂಬಂಧ ಘನ ನ್ಯಾಯಾಲಯ ನೀಡಿರುವ ಮಧ್ಯಂತರ ತೀರ್ಪಿನನ್ವಯ ಡಾ. ಅನಿತಾ.ಟಿ.ಎನ್ ಮತ್ತು ಡಾ.ಪರಿಮಳ ಸಿ.ಪಿ. ಇವರುಗಳನ್ನು ಉಲ್ಲೇಖಿತ (1) ರ ಪತ್ರದನ್ವಯ 2018–19 ಸಾಲಿಗೆ ಇವರುಗಳಿಗೆ ವಾರಕ್ಕೆ ತಲಾ 08 ಗಂಟೆಗಳ ಕಾರ್ಯಭಾರದೊಂದಿಗೆ ಮಹಿಳಾ ಅಧ್ಯಯನ ಕೇಂದ್ರ, ಮಾನಸಗಂಗೋತ್ರಿ, ಮೈಸೂರು ಇಲ್ಲಿ ಕಾರ್ಯನಿರ್ವಹಿಸಲು ಮುಂದುವರಿಸಲಾಗಿದ್ದು, ಉಲ್ಲೇಖ(2) ರ ಪತ್ರದಲ್ಲಿ ಕೇಂದ್ರದ ನಿರ್ದೇಶಕರು ಇವರುಗಳಿಗೆ 12 ಗಂಟೆಗಳ ಕಾರ್ಯಭಾರವನ್ನು ವಹಿಸುವಂತೆ ಕೋರಿರುವ ಪ್ರಸ್ತಾವನೆ ಸಲ್ಲಿಸಿರುವ ಹಿನ್ನೆಲೆಯಲ್ಲಿ ಕೆಳಕಂಡ ಆದೇಶ:

**ಆದೇಶ ಸಂಖ್ಯೆ: ಇಟ13/199/2017–18 ದಿನಾಂಕ 12 ನೇ ಅಕ್ಟೋಬರ್ 2018**

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ, ಉಲ್ಲೇಖಿತ (1) ರ ಪತ್ರದ ಮುಂದುವರಿಕೆಯಾಗಿ ಕೆಳಕಂಡ ಅತಿಥಿ ಉಪನ್ಯಾಸಕರಿಗೆ 2018–19 ನೇ ಸಾಲಿನಲ್ಲಿ ಈಗಾಗಲೇ ಹಂಚಿಕೆ ಮಾಡಲಾಗಿದ್ದ, ಬೋಧನಾ ಕಾರ್ಯಭಾರವನ್ನು ಕೋಷ್ಟಕದಲ್ಲಿ ನಮೂದಿಸಿರುವಂತೆ ಮಾರ್ಪಡಿಸಿ ಬೋಧನಾ ಕಾರ್ಯವನ್ನು ನಿರ್ವಹಿಸಲು ತಿಳಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ಹಿಂದೆ ಹಂಚಿಕೆ ಮಾಡಲಾಗಿದ್ದ ಬೋಧನಾ ಕಾರ್ಯಭಾರ | ಹಿಂದೆ ನಿಗಧಿಪಡಿಸಿದ ಸಂಭಾವನೆ ರೂ.ಗಳಲ್ಲಿ | ಪ್ರಸ್ತುತ ನಿಗಧಿಪಡಿಸಿದ (ಥಿಯರಿ/ ಕಾರ್ಯಭಾರ) * | ಪ್ರಸ್ತುತ ನಿಗಧಿಪಡಿಸಿದ ಮಾಹೆಯಾನ ಸಂಭಾವನೆ ರೂ.ಗಳಲ್ಲಿ | ಸ್ನಾತಕೋತ್ತರ ವಿಭಾಗ/ಕೇಂದ್ರ/ ಘಟಕ ಕಾಲೇಜು |
|---|---|---|---|---|---|---|
| ಡಾ.ಅನಿತ ಟಿ.ಎನ್. | ಮಹಿಳಾ ಅಧ್ಯಯನ | 08 | 15,000/- | 12 | 22,500/– | ಮಹಿಳಾ ಅಧ್ಯಯನ ಕೇಂದ್ರ, ಮಾ.ಗಂ.ಮೈಸೂರು |
| ಡಾ.ಪರಿಮಳ ಸಿ.ಪಿ. | ಮಹಿಳಾ ಅಧ್ಯಯನ | 08 | 15,000/- | 12 | 22,500/– | ಮಹಿಳಾ ಅಧ್ಯಯನ ಕೇಂದ್ರ, ಮಾ.ಗಂ.ಮೈಸೂರು |

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ ಕಾಶಿಇ/44/ಅಉನೇ/2012–13ನೇ ಪಾವಿ–1, ದಿನಾಂಕ 02.7.2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿನ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ನಿರ್ದೇಶಕರು
ಮಹಿಳಾ ಅಧ್ಯಯನ ಕೇಂದ್ರ
ಮೈಸೂರು ವಿಶ್ವವಿದ್ಯಾನಿಲಯ

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಈ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2018–19ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಸಾಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಬಾರದು.

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

## ಮುಚ್ಚಳಿಕೆ

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2018–19ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.
2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ ಕಾಶಿಇ/44/ಆಉನೇ/2012–13ನೇ ಪಾವಿ–1 ದಿನಾಂಕ 02.7.2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ ಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದು ಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಸೂಚನೆ ನೀಡದೇ ರದ್ದುಪಡಿಸಲಾಗುದೆಂದು ತಿಳಿದಿರುತ್ತೇನೆ. ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧರಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.
3. ಕೇಂದ್ರದಲ್ಲಿ ಕಾರ್ಯಭಾರವಿದ್ದಾಗ ವಾರಕ್ಕೆ 12 ಗಂಟೆಗಳ ಅವಧಿಗೆ ಹಾಗೂ ಕಾರ್ಯಭಾರ ಕಡಿಮೆ ಇದ್ದಾಗ ವಾರಕ್ಕೆ 08 ಗಂಟೆಗಳ ಅವಧಿಗೆ ಆಹ್ವಾನಿಸುವುದನ್ನು ಪ್ರಶ್ನಿಸದೆ ವಿಶ್ವವಿದ್ಯಾನಿಲಯದ ಆದೇಶಕ್ಕೆ ಬದ್ಧರಾಗಿರುತ್ತೇವೆ.

ಆದೇಶದ ಮೇರೆಗೆ,

12/10/18

-ಕುಲಸಚಿವರು

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರಿಗೆ –ನಿರ್ದೇಶಕರು, ಮಹಿಳಾ ಅಧ್ಯಯನ ಕೇಂದ್ರ, ಮಾನಸಗಂಗೋತ್ರಿ, ಮೈಸೂರು.
2. ನಿರ್ದೇಶಕರು, –ನಿರ್ದೇಶಕರು, ಮಹಿಳಾ ಅಧ್ಯಯನ ಕೇಂದ್ರ, ಮಾನಸಗಂಗೋತ್ರಿ, ಮೈಸೂರು–ಅತಿಥಿ ಉಪನ್ಯಾಸಕರಿಂದ ಮೇಲೆ ತಿಳಿಸಿರುವ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಬರೆಸಿಕೊಳ್ಳುವುದು.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಆಡಳಿತಾಧಿಕಾರಿಯವರು, ಮಾನಸಗಂಗೋತ್ರಿ, ಮೈಸೂರು.
6. ಉಪಕುಲಸಚಿವರು(ಸಾಮಾನ್ಯ)/ಸಹಾಯಕ ಕುಲಸಚಿವ/ಅಧೀಕ್ಷಕರು (ಸಿಬ್ಬಂದಿ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು.
9. ಕುಲಪತಿ/ಕುಲಸಚಿವ/ಹಣಕಾಸು ಅಧಿಕಾರಿ/ಕುಲಸಚಿವ(ಪ) ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಕಛೇರಿ ಪ್ರತಿ.